**ಕರ್ನಾಟಕ ಸರ್ಕಾರ**

ಸಂ. ಎ.ಎಲ್.ಎನ್/ಎಸ್ಆರ್(ಎಸ್)/789/04–05

ಜಿಲ್ಲಾಧಿಕಾರಿಗಳವರ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ: 19/11/2013

## -: ಪರಿಷ್ಕೃತ ಅಧಿಕೃತ ಜ್ಞಾಪನ :-

ವಿಷಯ:– ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ತುರಹಳ್ಳಿ ಗ್ರಾಮದ ಸ.ನಂ. 22/4 ರಲ್ಲಿ 1–31.08 ಗುಂಟೆ, ಸ.ನಂ. 23/4 ರಲ್ಲಿ 0–22 ಗುಂಟೆ ಒಟ್ಟು 2–13.08 ಎಕರೆ/ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತನೆ ಮಾಡಿದ್ದ ಆದೇಶವನ್ನು ನವೀಕರಿಸಿ ಕೊಡಲು ಕೋರಿರುವ ಬಗ್ಗೆ.

ಉಲ್ಲೇಖ:–
1) ಈ ಕಛೇರಿಯ ಸಮ ಸಂಖ್ಯೆಯ ಅಧಿಕೃತ ಜ್ಞಾಪನ ಪತ್ರದ ದಿನಾಂಕ: 28–04–2005
2) ಶ್ರೀ ಮಹಮದ್ ಇಕ್ಬಾಲ್ ಬಿನ್ ಲೇಟ್ ಹೆಚ್.ಮಿಯಾನ್ ಸಾಹೇಬ್ ರವರ ಮನವಿ ದಿನಾಂಕ: 29–10–2013
3) ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರ ವರದಿ ಸಂ: ಎಎಲ್ಎನ್/ಎಸ್ಆರ್(ಉ)/113/04–05 ದಿನಾಂಕ: 18/03/2005

****

ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ. ತುರಹಳ್ಳಿ ಗ್ರಾಮದ ಸ.ನಂ. 22/4 ರಲ್ಲಿ 1–31.08 ಗುಂಟೆ. ಸ.ನಂ. 23/4 ರಲ್ಲಿ 0–22 ಗುಂಟೆ ಒಟ್ಟು 2–13.08 ಎಕರೆ/ಗುಂಟೆ ವಿಸ್ತೀರ್ಣದ ಜಮೀನನ್ನು ಉಲ್ಲೇಖ (1)ರ ಈ ಕಛೇರಿಯ ಆದೇಶದ ರೀತ್ಯಾ ವಾಸದ ಉದ್ದೇಶಕ್ಕೆ ಶ್ರೀ ಮಹಮದ್ ಇಕ್ಬಾಲ್ ಬಿನ್ ಲೇಟ್ ಹೆಚ್.ಮಿಯಾನ್ ಸಾಹೇಬ್ ರವರ ಹೆಸರಿಗೆ ಭೂ ಪರಿವರ್ತನೆ ಆದೇಶ ನೀಡಲಾಗಿದ್ದು, ನಂತರ ಉಲ್ಲೇಖ (2) ರ ಅರ್ಜಿಯಲ್ಲಿ ಈ ಆದೇಶವನ್ನು ನಿಗಧಿತ ಅವಧಿಯಲ್ಲಿ ಭೂ ಪರಿವರ್ತನೆಯಾದ ಉದ್ದೇಶಕ್ಕೆ ಉಪಯೋಗಿಸಿಕೊಳ್ಳದ ಕಾರಣ, ಸದರಿ ಭೂ ಪರಿವರ್ತನಾ ಆದೇಶವನ್ನು ಕಾರ್ಯರೂಪಕ್ಕೆ ತರಲು ಸಾಧ್ಯವಾಗಿರುವುದಿಲ್ಲವೆಂದು ಅರ್ಜಿ ಸಲ್ಲಿಸಿ, ನವೀಕರಿಸಿ ಕೊಡಲು ಕೋರಿರುತ್ತಾರೆ.

ಆದರೆ, ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ ಕಲಂ 95(2) ರಡಿ ಪರಿಶೀಲಿಸಲಾಗಿ, ಭೂ ಪರಿವರ್ತನೆ ಆದೇಶಗಳನ್ನು ನವೀಕರಿಸುವ ಬಗ್ಗೆ ಯಾವುದೇ ಸ್ಪಷ್ಟತೆ ಇರುವುದಿಲ್ಲ.

ಆದ್ದರಿಂದ ಅರ್ಜಿದಾರರ ಮನವಿಯನ್ನು ಪರಿಗಣನೆಗೆ ತೆಗೆದುಕೊಂಡು ಉಲ್ಲೇಖ(1)ರ ಅಧಿಕೃತ ಜ್ಞಾಪನ ಪತ್ರದಲ್ಲಿ ವಿಧಿಸಿರುವ 7ನೇ ಷರತ್ತು ಎರಡು ವರ್ಷ ಎನ್ನುವುದನ್ನು ಕೈ ಬಿಡಲಾಗಿದೆ. ಉಳಿದಂತೆ ದಿನಾಂಕ: 28–04–2005 ರಲ್ಲಿನ ಅಧಿಕೃತ ಜ್ಞಾಪನ ಪತ್ರದಲ್ಲಿ ನಮೂದಿಸಿರುವ ಷರತ್ತುಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಸಹಿ/–
(ಡಾ: ಜಿ.ಸಿ.ಪ್ರಕಾಶ್)
ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

**ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಿದೆ:–**

1) ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರಿಗೆ ಸೂಕ್ತ ಕ್ರಮಕ್ಕಾಗಿ.
2) ಸದಸ್ಯ ಕಾರ್ಯದರ್ಶಿಗಳು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ರವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3) ಶ್ರೀ ಮಹಮದ್ ಇಕ್ಬಾಲ್ ಬಿನ್ ಲೇಟ್ ಹೆಚ್.ಮಿಯಾನ್ ಸಾಹೇಬ್, ನಂ. 5, 7ನೇ ರಸ್ತೆ, ನಂದಿ ದುರ್ಗಾ ಬಡಾವಣೆ, ಬೆಂಗಳೂರು–560046 ರವರಿಗೆ ಮಾಹಿತಿಗಾಗಿ.
4) ಹೆಚ್ಚಿನ ಪ್ರತಿ.

ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

**ಕರ್ನಾಟಕ ಸರ್ಕಾರ**

ಸಂಖ್ಯೆ:ಬಿಡಿಸ್:ಎಎಲ್‌ಎನ್:ಎಸ್‌ಆರ್(ಎಸ್):789/2004-05.

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ: 28-04-2005.

**:: ಅಧಿಕೃತ ಜ್ಞಾಪನ ::**

ವಿಷಯ: ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ತುರಹಳ್ಳಿ ಗ್ರಾಮದ ಸರ್ವೆನಂಬರ್.22/4ರಲ್ಲಿ 1-31½ ಗುಂಟೆ ಮತ್ತು ಸನಂ.23/4ರಲ್ಲಿ 0-22 ಗುಂಟೆ, ಒಟ್ಟು 2-13½ ಗುಂಟೆ (ಎರಡು ಎಕರೆ ಹದಿಮೂರುವರೆ ಗುಂಟೆ) ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ ಶ್ರೀ ಮಹಮದ್ ಇಕ್ಬಾಲ್ ಬಿನ್ ಲೇಟ್ ಹೆಚ್.ಮಿಯಾನ್ ಸಾಹೇಬ್, ಬೆಂಗಳೂರು ರವರು ಸಲ್ಲಿಸಿರುವ ಅರ್ಜಿ ದಿನಾಂಕ: 15-02-2005.

ಉಲ್ಲೇಖ: 1) ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರ ವರದಿ ಸಂಖ್ಯೆ:ಎಎಲ್‌ಎನ್: ಎಸ್‌ಆರ್(ಉ):113:2004-05, ದಿನಾಂಕ: 18-03-2005.

2) ಭೂ ಪರಿವರ್ತನಾ ಶುಲ್ಕ ರೂ.1,27,278-00 ಹಾಗೂ ಪೋಡಿ ಶುಲ್ಕ ರೂ.110-00, ಒಟ್ಟು ರೂ.1,27,388-00ಗಳನ್ನು ಚಲನ್ ನಂಬರ್.12, ದಿನಾಂಕ: 16-04-2005ರಂದು ಎಸ್.ಬಿ.ಎಂ. ಬೆಂಗಳೂರು ಇಲ್ಲಿ ಅರ್ಜಿದಾರರು ಜಮಾ ಮಾಡಿರುತ್ತಾರೆ.

* * *

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ.95(2), 95(4) ಮತ್ತು 95(7)ರ ಷರತ್ತುಗಳು ಹಾಗೂ ಷರತ್ತುಗೊಳಪಡಿಸಿ, ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994ರ ನಿಯಮ 107 (1)ರಂತೆ ಎಕರೆ ಒಂದಕ್ಕೆ ರೂ.54,450-00 (ರೂಪಾಯಿಗಳು ಐವತ್ತು ನಾಲ್ಕು ಸಾವಿರದ ನಾಲ್ಕು ನೂರ ಐವತ್ತು ಮಾತ್ರ) ಗಳಂತೆ ಅರ್ಜಿದಾರರು ಉಲ್ಲೇಖ (2) ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ ಮೇರೆಗೆ ಅರ್ಜಿದಾರರಾದ ಶ್ರೀ ಮಹಮದ್ ಇಕ್ಬಾಲ್ ಬಿನ್ ಲೇಟ್ ಹೆಚ್.ಮಿಯಾನ್ ಸಾಹೇಬ್, ಬೆಂಗಳೂರು ರವರ ಅರ್ಜಿಯನ್ನು ಪರಿಗಣಿಸಿ ಉತ್ತರಹಳ್ಳಿ ಹೋಬಳಿ, ತುರಹಳ್ಳಿ ಗ್ರಾಮದ ಸರ್ವೆನಂಬರ್.22/4ರಲ್ಲಿ 1-31½ ಗುಂಟೆ ಮತ್ತು ಸನಂ.23/4ರಲ್ಲಿ 0-22 ಗುಂಟೆ, ಒಟ್ಟು 2-13½ ಗುಂಟೆ (ಎರಡು ಎಕರೆ ಹದಿಮೂರುವರೆ ಗುಂಟೆ) ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1) ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕಾಗಿ ಉಪಯೋಗಿಸಿ ಕೊಳ್ಳಲು ಸಕ್ಷಮ ಪ್ರಾಧಿಕಾರಿಯಿಂದ ಅಂದರೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.

2) ಈ ಪರಿವರ್ತಿತ ಜಮೀನನ್ನು ವಾಸದ ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೆ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.

3) ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರವರಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್ ಪ್ಲಾನಿಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.

4) ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಖಾಲಿ ಜಾಗ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರವರಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟ ಪಡಿಸಿದ ನಿಯಮಗಳ ರೀತ್ಯ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

5) ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ನೀರು ಸರಬರಾಜು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನುರೀತ್ಯಾ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

___2)

6) ಈ ಜಮೀನಿಗೆ ತಾಕು ಫ್ಲೂಟ್ ಖರಾಬ್ ಜಮೀನಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ.67ರಂತೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು. ಹಾಗೂ ಪ್ರಸ್ತುತ ಭೂ ಪರಿವರ್ತನೆಗೆ ಒಳಪಟ್ಟಿರುವ ಸ.ನಂ.22/4ರಲ್ಲಿ 0-0½ ಗುಂಟೆ "ಬಿ" ಖರಾಬ್ ವಿಸ್ತೀರ್ಣ ಇದ್ದು, ಇದನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿರಿಸಲಾಗಿದೆ. ಈ ವಿಸ್ತೀರ್ಣದ ಮೇಲೆ ಅರ್ಜಿದಾರರಿಗೆ ಯಾವ ಹಕ್ಕು ಇರುವುದಿಲ್ಲ. ಈ ಬಿ ಖರಾಬ್ ವಿಸ್ತೀರ್ಣದ ಹಕ್ಕು ಯಾವಾಗಲೂ ಸರ್ಕಾರಕ್ಕೆ ಸೇರಿರುತ್ತದೆ. ತಹಶೀಲ್ದಾರ್‌ರವರು ಈ ಬಾಬ್ತು ಆರ್.ಟಿ.ಸಿ.ಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.

7) ಭೂ ಪರಿವರ್ತನೆ ಮಂಜೂರಿ ಯಾವ ಉದ್ದೇಶಕ್ಕೆ ಆಗಿರುತ್ತದೆಯೋ ಆದೇ ಉದ್ದೇಶಕ್ಕೆ ಈ ದಿನದಿಂದ ಎರಡು ವರ್ಷಗಳ ಒಳಗಾಗಿ ಉಪಯೋಗಿಸತಕ್ಕದ್ದು.

8) ಸರ್ಕಾರದ ಆದೇಶ ಸಂಖ್ಯೆ:ಪಿಡಬ್ಲ್ಯುಡಿ:7556-665 ಆರ್ ಮತ್ತು ಬಿ–6-54-5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ.ಪಿ 1: 7(11)67, ದಿನಾಂಕ: 1.1.1966 ರಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ, ರಸ್ತೆಯ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9) ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ : ರಿಟ್ ಅರ್ಜಿ : ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶ ಯಾವುದೇ ಸೂಚನೆ ನೀಡದೆ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964ರ ಕಲಂ.96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.ಅಲ್ಲದೆ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೆ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೇದಾರರಿಂದ ವಸೂಲಿ ಮಾಡಲಾಗುವುದು.

: <u>ಷೆಡ್ಯೂಲ್ ವಿವರ</u> :

ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ತುರಹಳ್ಳಿ ಗ್ರಾಮದ ಸರ್ವೆ ನಂಬರ್ 22/4ರಲ್ಲಿ 1-31½ ಗುಂಟೆ ಮತ್ತು ಸನಂ.23/4ರಲ್ಲಿ 0-22 ಗುಂಟೆ, ಒಟ್ಟು 2-13½ ಗುಂಟೆ (ಎರಡು ಎಕರೆ ಹದಿಮೂರುವರೆ ಗುಂಟೆ ವಿಸ್ತೀರ್ಣಕ್ಕೆ ಮಾತ್ರ) ವಿಸ್ತೀರ್ಣಕ್ಕೆ ಭೂ ಪರಿವರ್ತಿತ ಜಮೀನಿಗೆ ಚಕ್ಕುಬಂದಿ:

| | | |
|---|---|---|
| ಪೂರ್ವಕ್ಕೆ | :: | ಸ.ನಂ.22/5ರ ಎಸ್.ಎಂ.ಗಣೇಶರಾಯರ ಜಮೀನು. |
| ಪಶ್ಚಿಮಕ್ಕೆ | :: | ಸ.ನಂ.22/3ರ ಎಸ್.ಎಂ.ಲಕ್ಷ್ಮಣರಾಯರ ಜಮೀನು. |
| ಉತ್ತರಕ್ಕೆ | :: | ಕೆರೆಕೋಡಿ. |
| ದಕ್ಷಿಣಕ್ಕೆ | :: | ಹಳ್ಳ. |

ಸಹಿ/-
( ಡಾ: ರಾಮೇಗೌಡ )
ವಿಶೇಷ ಜಿಲ್ಲಾಧಿಕಾರಿ (ಕಂ.)
ಬೆಂಗಳೂರು ಜಿಲ್ಲೆ.

<u>ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಿದೆ:</u>

1) ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ರವರಿಗೆ ಮೂಲ ಕಡತ ಹಾಗೂ ಚಲನ್‌ನೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಗಣಕೀಕೃತ ಆರ್.ಟಿ.ಸಿ. ಯಲ್ಲಿ ತಕ್ಷಣ ನಮೂದಿಸತಕ್ಕದ್ದು ಮತ್ತು ಈ ಜಮೀನಿಗೆ ಖಾತೇದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸುವುದು.

2) ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ

3) ಉಪ ವಿಭಾಗಾಧಿಕಾರಿಗಳು, ಬೆಂಗಳೂರು ದಕ್ಷಿಣ ಉಪ ವಿಭಾಗ, ಬೆಂಗಳೂರು.

4) ಉಪ ನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪ ವಿಭಾಗ.

5) ಅರ್ಜಿದಾರರಾದ ಶ್ರೀ ಮಹಮದ್ ಇಕ್ಬಾಲ್ ಬಿನ್ ಲೇಟ್ ಹೆಚ್.ಮಿಯಾನ್ ಸಾಹೇಬ್, ಪ್ಲಾಟ್ ನಂ.2, ಫರಹ್ ಗಾರ್ಡನ್, ನಂ.17/1, ವೆಲ್ಲಿಂಗ್‌ಟನ್ ಸ್ಟ್ರೀಟ್, ರಿಚ್‌ಮಂಡ್ ಟೌನ್, ಬೆಂಗಳೂರು-25 ರವರಿಗೆ ದೃಢೀಕೃತ ಅಂಚೆ ಮೂಲಕ.

6) ಹೆಚ್ಚಿನ ಪ್ರತಿ.

ವಿಶೇಷ ಜಿಲ್ಲಾಧಿಕಾರಿ (ಕಂ.)
ಬೆಂಗಳೂರು ಜಿಲ್ಲೆ.

ಸಂ:ಎಎಲ್‌ಎನ್:(ಎಸ್.ಯು.)(ಉ)ಎಸ್‌ಆರ್:16/13-14

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ: 28-11-2013.

**ಅಧಿಕೃತ ಜ್ಞಾಪನ**

ವಿಷಯ:- ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, **ತುರಹಳ್ಳಿ ಗ್ರಾಮದ ಸರ್ವೆ ನಂಬರ್ 17/1 ರಲ್ಲಿ 0-18 ಗುಂಟೆ, ಸರ್ವೆ** ನಂ. **17/2 ರಲ್ಲಿ 1-11 ಎಕರೆ/ಗುಂಟೆ ಸರ್ವೆ** ನಂ. **17/3 ರಲ್ಲಿ 1-04 ಎಕರೆ/ಗುಂಟೆ ಸರ್ವೆ** ನಂ. **20/5 ರಲ್ಲಿ 0-34 ಗುಂಟೆ, ಸರ್ವೆ** ನಂ. **20/6 ರಲ್ಲಿ 1-03 ಎಕರೆ/ಗುಂಟೆ ಸರ್ವೆ** ನಂ. **20/7 ರಲ್ಲಿ 1-09 ಎಕರೆ/ಗುಂಟೆ ಒಟ್ಟು 5-39 ಎಕರೆ/ಗುಂಟೆ** ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ **ವಾಸದ** ಉದ್ದೇಶಕ್ಕೆ ಭೂ ಪರಿವರ್ತನೆ ಕೋರಿ **ಶ್ರೀ ಮೊಹಮದ್ ಇಕ್ಬಾಲ್ ಬಿನ್ ಲೇಟ್ ಮಿಯಾನ್ ಸಾಹೇಬ್, ನಂ. 5, 7ನೇ ರಸ್ತೆ, ನಂದಿದುರ್ಗ ಬಡಾವಣೆ, ಬೆಂಗಳೂರು-46** ರವರು ಸಲ್ಲಿಸಿರುವ ಅರ್ಜಿ ದಿನಾಂಕ: 20-09-2013.

ಉಲ್ಲೇಖ:- 1) ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್‌ಡಿ 7 ಎಲ್‌ಜಿಪಿ 95 ದಿನಾಂಕ: 7-6-1999.
2) ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್.ಡಿ:56:ಎಲ್‌ಜಿಪಿ 2008 ದಿನಾಂಕ:10-9-2008 ಮತ್ತು 24-9-2008.
3) ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು, ರವರ ವರದಿ ಸಂಖ್ಯೆ ಎಎಲ್‌ಎನ್:ಎಸ್.ಆರ್:385/13-14, ದಿನಾಂಕ : 24-10-2013.
4) ಭೂ ಪರಿವರ್ತನಾ ಶುಲ್ಕ ರೂ. 3,26,700-00 ಹಾಗೂ ಪೋಡಿ ಶುಲ್ಕ ರೂ.330-00 ಒಟ್ಟು ರೂ.3,27,030-00 ಗಳನ್ನು ಚಲನ್ ನಂಬರ್.-54/308 & 54/309 ದಿನಾಂಕ: 23-11-2013 ರಂದು ಎಸ್.ಬಿ.ಎಂ.ಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು, ನಗರ ಯೋಜನಾ ವಿಭಾಗ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರವರ ಪತ್ರ ಸಂಖ್ಯೆ:ಬೆಂಅಪ್ರಾ/ನಯೋಸ/ಸಿಓಎಸ್-1014/3627/2013-14, ದಿನಾಂಕ:06-11-2013 ಮತ್ತು ಉಪ ಆಯುಕ್ತರು (ಭೂ.ಸ್ವಾ.) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರ ಪತ್ರ ಸಂಬೆಂಅಪ್ರಾ/ಉಆ(ಭೂಸ್ವಾ)/3554/13-14, ದಿನಾಂಕ: 06-11-2013.

:: 0 ::

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95(2), 95(4) ಮತ್ತು 95(7) ರ ಷರತ್ತುಗಳು, ಹಾಗೂ ಷರತ್ತುಗಳಿಗೊಳಪಡಿಸಿ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994 ರ ನಿಯಮ 107(1) ರಂತೆ ಎಕರೆ ಒಂದಕ್ಕೆ ರೂ.54,450-00 (ಐವತ್ನಾಲ್ಕು ಸಾವಿರದ ನಾನ್ನೂರ ಐವತ್ತು ಮಾತ್ರ) ಗಳಂತೆ ಅರ್ಜಿದಾರರು ಉಲ್ಲೇಖ (4) ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ ಮೇರೆಗೆ ಅರ್ಜಿದಾರರಾದ **ಶ್ರೀ ಮೊಹಮದ್ ಇಕ್ಬಾಲ್ ಬಿನ್ ಲೇಟ್ ಮಿಯಾನ್ ಸಾಹೇಬ್, ನಂ. 5, 7ನೇ ರಸ್ತೆ, ನಂದಿದುರ್ಗ ಬಡಾವಣೆ, ಬೆಂಗಳೂರು-46** ರವರ ಅರ್ಜಿಯನ್ನು ಪರಿಗಣಿಸಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, **ತುರಹಳ್ಳಿ ಗ್ರಾಮದ ಸರ್ವೆ ನಂಬರ್ 17/1 ರಲ್ಲಿ 0-18 ಗುಂಟೆ, ಸರ್ವೆ** ನಂ. **17/2 ರಲ್ಲಿ 1-11 ಎಕರೆ/ಗುಂಟೆ ಸರ್ವೆ** ನಂ. **17/3 ರಲ್ಲಿ 1-04 ಎಕರೆ/ಗುಂಟೆ ಸರ್ವೆ** ನಂ. **20/5 ರಲ್ಲಿ 0-34 ಗುಂಟೆ, ಸರ್ವೆ** ನಂ. **20/6 ರಲ್ಲಿ 1-03 ಎಕರೆ/ಗುಂಟೆ ಸರ್ವೆ** ನಂ. **20/7 ರಲ್ಲಿ 1-09 ಎಕರೆ/ಗುಂಟೆ ಒಟ್ಟು 5-39 ಎಕರೆ/ಗುಂಟೆ** ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ **ವಾಸದ** ಉದ್ದೇಶಕ್ಕೆ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರದಿಂದ ಅಂದರೆ, **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ)/"ಬಿ.ಎಂ.ಆರ್.ಡಿ.ಎ."(ಸ್ಥಳೀಯ ಯೋಜನಾ ಪ್ರಾಧಿಕಾರ/ ಬಿ.ಎಂ.ಐ.ಸಿ.ಎ.ಪಿ.ಎ/ ಮಾಲಿನ್ಯ ನಿಯಂತ್ರಣಾ ಮಂಡಳಿ** ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.

2. ಈ ಭೂ ಪರಿವರ್ತಿತ ಜಮೀನನ್ನು **ವಾಸದ** ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈಜಮೀನನ್ನು ಪೂರ್ವಾನುಮತಿ ಇಲ್ಲದೇ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.

--2.

3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/"ಬಿ.ಎಂ.ಆರ್.ಡಿ.ಎ."(ಸ್ಥಳೀಯ ಯೋಜನಾ ಪ್ರಾಧಿಕಾರ/ ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ** ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್/ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.

4. ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಉದ್ಯಾನವನ, ಸಿ.ಎ. ನಿವೇಶನ ಖಾಲಿ ಜಾಗ, ಇತ್ಯಾದಿಗಳನ್ನು **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/"ಬಿ.ಎಂ.ಆರ್.ಡಿ.ಎ."(ಸ್ಥಳೀಯ ಯೋಜನಾ ಪ್ರಾಧಿಕಾರ)/ ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ** ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟಪಡಿಸಿದ ನಿಯಮಗಳ ರೀತ್ಯಾ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

5. **ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೆ ನಿವೇಶನಗಳನ್ನು/ಕಟ್ಟಡಗಳನ್ನು ನೋಂದಣಾಧಿಕಾರಿಗಳಿಂದ ಉಪನೊಂದಣಾಧಿಕಾರಿಗಳಿಂದ ನೋಂದಾವಣೆ ಮಾಡತಕ್ಕದ್ದಲ್ಲ, ಖಾತೆದಾರರು ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿನ ಪೂರ್ಣ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದಲ್ಲಿ ಆದೇಶದ ಅಡ್ಡಿ** ಬರುವುದಿಲ್ಲ.

6. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ರಸ್ತೆ, ಕುಡಿಯುವ ನೀರು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7. **ಈ ಜಮೀನಿನ ಸ.ನಂ. 20/5 ರಲ್ಲಿ 0–01 ಗುಂಟೆ ಸ.ನಂ. 20/6 ರಲ್ಲಿ 0–01 ಗುಂಟೆ ಸ.ನಂ. 20/7 ರಲ್ಲಿ 0–01 ಗುಂಟೆ ಖರಾಬು ಇದ್ದು, ಆಕಾರ್ ಬಂದ್ ತಯಾರಿಸಿ ಡಿ.ಡಿ.ಎಲ್.ಆರ್. ರವರು ಅನುಮೋದಿಸಬೇಕಾಗಿರುತ್ತದೆ. ಈ ಬಾಬ್ತು ಆರ್.ಟಿ.ಸಿ.ಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.**

8. ಸರ್ಕಾರದ ಆದೇಶ ಸಂಖ್ಯೆ ಪಿಡಬ್ಲ್ಯೂಡಿ 7556–665 ಆರ್ ಮತ್ತು ಬಿ–6–54–5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ. ಪಿ.1/7(11)67, ದಿನಾಂಕ: 01–01–1966 ರಂತೆ ಸರ್ಕಾರವು ಕಾಲಕಾಲಕ್ಕೆ ನೀಡುವ ಆದೇಶದಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾಯ್ದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9. ಈ ಭೂ ಪರಿವರ್ತನಾ ಜಮೀನಿನಲ್ಲಿ **ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳು ಹೊರದೂಡುವ ಹೊಗೆ, ಅನಿಲ, ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು.** ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪರಿಸರ ಇಲಾಖೆಗೆ ಅನುಮತಿ ಹೊಂದಿರತಕ್ಕದ್ದು.

10. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ / ರಿಟ್ ಅರ್ಜಿ/ ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

11. ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

12. ಪ್ರಶ್ನಿತ ಜಮೀನು ಸರ್ಕಾರಿ ಜಮೀನು ವ್ಯಾಪ್ತಿಗೆ ಒಳಪಟ್ಟಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136(3) ರ ಅಡಿ ವಿಚಾರಣೆ ನಡೆಸಿ ಹೊರಡಿಸುವ ತೀರ್ಮಾನಕ್ಕೆ ಒಳಪಟ್ಟಿರುತ್ತದೆ.

13. ಪ್ರಶ್ನಿತ ಜಮೀನು ಸರ್ಕಾರಿ ಜಮೀನು ಮಂಜೂರಾದ ಸರ್ಕಾರಿ ಜಮೀನಾಗಿದ್ದಲ್ಲಿ ತಕ್ಷಣವೇ ಪಕ್ಕ ಪೋಡಿ ಮಾಡಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

14. ಪರಿಷ್ಕೃತ ಮಾಸ್ಟರ್ ಪ್ಲಾನ್ –2015 ರಲ್ಲಿ ಸೂಕ್ಷ್ಮ ವಲಯ (Sensitive Zone) ನಲ್ಲಿ ಬರುವ ಪ್ರದೇಶಗಳಿಗೆ ಸಂಬಂಧಪಟ್ಟ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿಯನ್ನು ಕೈಗೊಳ್ಳಬಾರದು.

15. ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಬೇಕಾದಲ್ಲಿ ಪ್ರಾಧಿಕಾರದಿಂದ ರಚಿತವಾದ ಉಪ ಸಮಿತಿಯ ನಿರ್ಣಯದಂತೆ ನಕ್ಷೆಗಳನ್ನು ಅನುಮೋದಿಸಿಕೊಳ್ಳತಕ್ಕದ್ದು.

16. ಅರ್ಜಿದಾರರು ಯಾವುದೇ ಸತ್ಯಾಂಶಗಳನ್ನು ಮರೆ ಮಾಚಿ, ಅನಧಿಕೃತ ದಾಖಲೆಗಳ ಮೇಲೆ ಈ ಅಧಿಕೃತ ಜ್ಞಾಪನ ಪಡೆದಿರುವುದು ದೃಢಪಟ್ಟಲ್ಲಿ ತನ್‌ತಾನೇ ರದ್ದುಗೊಳ್ಳುತ್ತದೆ ಹಾಗೂ ಇದರಿಂದ ಅರ್ಜಿದಾರರಿಗಾಗಲೀ ಅಥವಾ ಅವರ ಉತ್ತರಾಧಿಕಾರಿಗಳಿಗಾಗಲೀ ಆಗುವ ಯಾವುದೇ ಲುಕ್ಸಾನಿಗೆ ಸರ್ಕಾರವಾಗಲೀ ಅಥವಾ ಈ ಪ್ರಾಧಕಾರವಾಗಲೀ ಯಾವುದೇ ರೀತಿಯ ಜವಾಬ್ದಾರರಾಗಿರುವುದಿಲ್ಲ. ಇದರ ಪೂರ್ಣ ಹೊಣೆಗಾರಿಕೆ ಅರ್ಜಿದಾರರದ್ದೇ ಆಗಿರುತ್ತದೆ.

––2.

17. ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶವನ್ನು ಯಾವುದೇ ಸೂಚನೆ ನೀಡದೇ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು. ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೇ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು. ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೇದಾರರಿಂದ ವಸೂಲಿ ಮಾಡಲಾಗುವುದು.

**ಷೆಡ್ಯೂಲ್ ವಿವರ**

ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, **ತುರಹಳ್ಳಿ ಗ್ರಾಮದ ಸರ್ವೆ ನಂಬರ್ 17/1 ರಲ್ಲಿ 0–18 ಗುಂಟೆ, ಸರ್ವೆ** ನಂ. **17/2 ರಲ್ಲಿ 1–11 ಎಕರೆ/ಗುಂಟೆ ಸರ್ವೆ** ನಂ. **17/3 ರಲ್ಲಿ 1–04 ಎಕರೆ/ಗುಂಟೆ ಸರ್ವೆ** ನಂ. **20/5 ರಲ್ಲಿ 0–34 ಗುಂಟೆ, ಸರ್ವೆ** ನಂ. **20/6 ರಲ್ಲಿ 1–03 ಎಕರೆ/ಗುಂಟೆ ಸರ್ವೆ** ನಂ. **20/7 ರಲ್ಲಿ 1–09 ಎಕರೆ/ಗುಂಟೆ ಒಟ್ಟು 5–39 ಎಕರೆ**/ಗುಂಟೆ ವಿಸ್ತೀರ್ಣದ ಭೂ ಪರಿವರ್ತಿತ ಜಮೀನಿನ ಚೆಕ್ಕುಬಂದಿ.

**–: ಚೆಕ್ಕುಬಂದಿ :–**

| | |
|---|---|
| **ಪೂರ್ವಕ್ಕೆ** | ರಾಜಕಾಲುವೆ ಹಾಗೂ ಸರ್ವೆ ನಂ. 17/4, 20/8 ರ ಜಮೀನು |
| **ಪಶ್ಚಿಮಕ್ಕೆ** | ಸರ್ವೆ ನಂ. 19 ಮತ್ತು ಸರ್ವೆ ನಂ. 20/2,3,4 ರ ಜಮೀನು |
| **ಉತ್ತರಕ್ಕೆ** | ರಸ್ತೆ |
| **ದಕ್ಷಿಣಕ್ಕೆ** | ರಾಜಕಾಲುವೆ |

ಸಹಿ/–
(ಡಾ॥ ಜಿ.ಸಿ. ಪ್ರಕಾಶ್),
ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ,ಬೆಂಗಳೂರು.

**ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಲಾಗಿದೆ.**

1) ತಹಶೀಲ್ದಾರರು, ಬೆಂಗಳೂರು ದಕ್ಷಿಣ ತಾಲ್ಲೂಕು, ರವರಿಗೆ ಮೂಲ ಕಡತ ಹಾಗೂ ಚಲನ್‌ದೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂ. ಭೂ ಪರಿವರ್ತನೆಯಾಗಿದೆ ಎಂದು ಗಣಕೀಕೃತ ಆರ್.ಟಿ.ಸಿ.ಯಲ್ಲಿ ಕೂಡಲೇ ನಮೂದಿಸತಕ್ಕದ್ದು. ಮತ್ತು ಈ ಜಮೀನಿಗೆ ಖಾತೇದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿತಗೊಳಿಸತಕ್ಕದ್ದು.
2) ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
3) ಉಪವಿಭಾಗಾಧಿಕಾರಿಗಳು, ಬೆಂಗಳೂರು ದಕ್ಷಿಣ ಉಪವಿಭಾಗ, ಬೆಂಗಳೂರು.
4) ಉಪನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪವಿಭಾಗ, ಬೆಂಗಳೂರು. ಇವರಿಗೆ ಆರ್.ಟಿ.ಸಿ ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5) ಉಪ ನೋಂದಣಾಧಿಕಾರಿಗಳು, ಉತ್ತರಹಳ್ಳಿ ಹೋಬಳಿ, ಕೆಂಗೇರಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ಇವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
6) ಅರ್ಜಿದಾರರಾದ **ಶ್ರೀ ಮೊಹಮದ್ ಇಕ್ಬಾಲ್ ಬಿನ್ ಲೇಟ್ ಮಿಯಾನ್ ಸಾಹೇಬ್, ನಂ. 5, 7ನೇ ರಸ್ತೆ, ನಂದಿದುರ್ಗ ಬಡಾವಣೆ, ಬೆಂಗಳೂರು–46** ರವರಿಗೆ ದೃಢೀಕೃತ ಅಂಚೆ ಮೂಲಕ ಕಳುಹಿಸಲಾಗಿದೆ.
7) ಹೆಚ್ಚಿನ ಪ್ರತಿ.

ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.